# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **1864** |
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ತಿಪ್ಪಣ್ಣಪ್ಪ ಕಮಕನೂರ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 23.03.2026 |
| ಉತ್ತರಿಸುವ ಸಚಿವರು | : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಪಡಿತರ ಚೀಟಿಗಳಿವೆ; ಅವುಗಳನ್ನು ಎಷ್ಟು ಫಲಾನುಭವಿಗಳು ಇದುವರೆಗೆ ಇ-ಕೆವೈಸಿ (e-KYC) ಪ್ರಕ್ರಿಯೆಯನ್ನು ಪೂರ್ಣಗೊಳಿಸಿಲ್ಲ; (ತಾಲ್ಲೂಕುವಾರು ಮಾಹಿತಿ ನೀಡುವುದು):</td><td>ಕಲಬುರಗಿ ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ.
<table>
<tr><td>ಅಂತ್ಯೋದಯ ಅನ್ನ ಪಡಿತರ ಚೀಟಿ</td><td>60533</td></tr>
<tr><td>ಆದ್ಯತಾ ಪಡಿತರ ಚೀಟಿ</td><td>517272</td></tr>
<tr><td>ಆದ್ಯತೇತರ ಪಡಿತರ ಚೀಟಿ</td><td>130232</td></tr>
<tr><td>ಒಟ್ಟು</td><td>708037</td></tr>
</table>
ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳ್ಳದ ಪಡಿತರ ಚೀಟಿ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.</td></tr>
<tr><td>ಆ</td><td>ಇ-ಕೆವೈಸಿ (e-KYC) ಪ್ರಕ್ರಿಯೆಯನ್ನು ಪೂರ್ಣಗೊಳದ ಕಾರಣ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಪಡಿತರ ಚೀಟಿಗಳನ್ನು ಅಮಾನತ್ತಿನಲ್ಲಿಡಲಾಗಿದೆ ಅಥವಾ ರೇಷನ್ ವಿತರಣೆಯನ್ನು ಸ್ಥಗಿತಗೊಳಿಸಲಾಗಿದೆ;</td><td>ಇ- ಕೈವೈಸಿ (e-kyc) ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ ಕಲಬುರಗಿ ಜಿಲ್ಲೆಯಲ್ಲಿ ಯಾವುದೇ ಪಡಿತರ ಚೀಟಿಗಳನ್ನು ಅಮಾನತ್ತು ಅಥವಾ ಸ್ಥಗಿತಗೊಳಿಸಿರುವುದಿಲ್ಲ.</td></tr>
<tr><td>ಇ</td><td>ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಇ-ಪಿಒಎಸ್ (e-PoS) ಯಂತ್ರಗಳ ಸರ್ವರ್ ಸಮಸ್ಯೆ ಹಾಗೂ ತಾಂತ್ರಿಕ ದೋಷಗಳಿಂದ ಪಡಿತರ ವಿತರಣೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತಾಂತ್ರಿಕ ಸುಧಾರಣೆಗೆ ಕೈಗೊಂಡಿರುವ ಕ್ರಮಗಳೇನು;</td><td>ಕಲಬುರಗಿ ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಇ-ಪಿಒಎಸ್ (e-PoS) ಯಂತ್ರಗಳ ಸರ್ವರ್ ಸಮಸ್ಯೆ ಹಾಗೂ ತಾಂತ್ರಿಕ ದೋಷಗಳು ಇರುವುದಿಲ್ಲ.</td></tr>
<tr><td>ಈ</td><td>ಕಲಬುರಗಿ ಜಿಲ್ಲೆಯಲ್ಲಿ ಓಡಾಡಲು ಅಸಾಧ್ಯವಾದ ವೃದ್ಧರು ಹಾಗೂ ಅಂಗವಿಕಲರಿಗೆ 'ಮನೆ ಬಾಗಿಲಿಗೆ ರೇಷನ್' ಪೂರೈಸುವ ಯೋಜನೆ ಜಾರಿಯಲ್ಲಿದೆಯೇ; ಇಲ್ಲದಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು;</td><td>75 ವರ್ಷಕ್ಕಿಂತ ಮೇಲ್ಪಟ್ಟ ಏಕ ಸದಸ್ಯ AAY/PHH ಫಲಾನುಭವಿಗಳಿಗೆ ಅನ್ನಸುವಿಧಾ ಯೋಜನೆಯಡಿ ಅವರ ಮನೆ ಬಾಗಿಲಿಗೆ ಆಹಾರಧಾನ್ಯಗಳನ್ನು ತಲುಪಿಸುವ ಯೋಜನೆಯನ್ನು ನವೆಂಬರ್ 2025ರ ಮಾಹೆಯಿಂದ ಜಾರಿಗೊಳಿಸಲಾಗಿರುತ್ತದೆ.</td></tr>
<tr><td>ಉ</td><td>ಜಿಲ್ಲೆಯಲ್ಲಿ ಅನರ್ಹ ಅಥವಾ ನಕಲಿ ಬಿಪಿಎಲ್ BPL ಕಾರ್ಡ್‌ಗಳನ್ನು</td><td>ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು</td></tr>
</table>

<table>
<tr>
<td></td>
<td>ಪತ್ತೆಹಚ್ಚಲು ಸರ್ಕಾರ ವಿಶೇಷ ಅಭಿಯಾನ ಕೈಗೊಂಡಿದೆಯೇ; ಈ ಅಭಿಯಾನದಡಿ ಕಲಬುರಗಿ ಜಿಲ್ಲೆಯಲ್ಲಿ ಇದುವರೆಗೆ ಪತ್ತೆಯಾದ ಅನರ್ಹ ಕಾರ್ಡ್‌ಗಳ ಸಂಖ್ಯೆ ಎಷ್ಟು?</td>
<td>ಗುರುತಿಸಲಾಗಿರುತ್ತದೆ.<br>1. CBDT Income Group Annual Income>1,20,000<br>2. GSTN Gross Turnover > 25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC > 12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased<br>12. Vehicle Ownership value Owning Light Motor Vehicle<br>13. Vehicle Ownership value Owning Medium Motor Vehicle<br>14. Vehicle Ownership value Owning Other than Mentioned Above.<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br><br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್‌ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ</td>
</tr>
</table>

| | | |
|---|---|---|
| | | ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br><br>ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ.<br>ಕಲಬುರಗಿ ಜಿಲ್ಲೆಯಲ್ಲಿ 10751 ಅನರ್ಹ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಆದ್ಯತೇತರ ಪಡಿತರ ಚೀಟಿಗೆ ಪರಿವರ್ತಿಸಲಾಗಿರುತ್ತದೆ. |

**ಇ- ಆನಾಪ 42 ಆನಾಪ 2026**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು

# ಅನುಬಂಧ-1

## ಶ್ರೀ. ತಿಪ್ಪಣ್ಣಪ್ಪ ಕಮಕನೂರು (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1864

## ಕಲಬುರಗಿ ಜಿಲ್ಲೆಯಲ್ಲಿ ಇ-ಕೆವೈಸಿ (e-KYC) ಪ್ರಕ್ರಿಯೆಯನ್ನು ಪೂರ್ಣಗೊಳಿಸಿಲ್ಲದ ತಾಲ್ಲೂಕುವಾರು ಫಲಾನುಭವಿಗಳ ಮಾಹಿತಿ

| ಕ್ರ. ಸಂ. | ತಾಲ್ಲೂಕು | ಅಂತ್ಯೋದಯ ಅನ್ನ ಪ.ಚೀಗಳ ಸಂಖ್ಯೆ | ಅಂತ್ಯೋದಯ ಅನ್ನ ಫಲಾನುಭವಿಗಳ ಸಂಖ್ಯೆ | ಆದ್ಯತಾ ಪ.ಚೀಗಳ ಸಂಖ್ಯೆ | ಆದ್ಯತಾ ಪಡಿತರ ಚೀಟಿ ಫಲಾನುಭವಿಗಳ ಸಂಖ್ಯೆ | ಆದ್ಯತೇತರ ಪ.ಚೀ ಗಳ ಸಂಖ್ಯೆ | ಆದ್ಯತೇತರ ಪ.ಚೀ ಫಲಾನುಭವಿಗಳ ಸಂಖ್ಯೆ | ಒಟ್ಟು ಪಡಿತರ ಚೀಟಿಗಳ ಸಂಖ್ಯೆ | ಒಟ್ಟು ಫಲಾನುಭವಿಗಳ ಸಂಖ್ಯೆ |
|---|---|---|---|---|---|---|---|---|---|
| 1 | ಅಫ್ಜಲ್‌ಪುರ | 213 | 270 | 2391 | 2978 | 4214 | 12865 | 6818 | 16113 |
| 2 | ಆಳಂದ | 284 | 318 | 2428 | 2696 | 6071 | 18322 | 8783 | 21336 |
| 3 | ಚಿಂಚೋಳಿ | 318 | 435 | 1074 | 1311 | 1576 | 3658 | 2968 | 5404 |
| 4 | ಚಿತ್ತಾಪುರ | 256 | 320 | 2375 | 3203 | 5617 | 20960 | 8248 | 24483 |
| 5 | ಕಲಬುರಗಿ | 208 | 258 | 4691 | 5669 | 37239 | 153580 | 42138 | 159507 |
| 6 | ಜೇವರ್ಗಿ | 78 | 100 | 586 | 714 | 3186 | 9272 | 3850 | 10086 |
| 7 | ಸೇಡಂ | 203 | 272 | 1008 | 1283 | 1040 | 2188 | 2251 | 3743 |
| 8 | ಯಡ್ರಾಮಿ | 61 | 112 | 511 | 709 | 1872 | 4849 | 2444 | 5670 |
| 9 | ಕಮಲಾಪುರ | 497 | 636 | 1475 | 1859 | 2337 | 7095 | 4309 | 9590 |
| 10 | ಕಾಳಗಿ | 106 | 136 | 554 | 641 | 777 | 2022 | 1437 | 2799 |
| 11 | ಶಹಾಬಾದ್ | 48 | 68 | 442 | 589 | 388 | 894 | 878 | 1551 |
| | **ಒಟ್ಟು** | **2272** | **2925** | **17535** | **21652** | **64317** | **235705** | **84124** | **260282** |